ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

15

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ವಿಶ್ವವಾಣಿ

ದಿನಾಂಕ : DATE 1/4/2021


# ಮಗಳ ವಿರುದ್ಧವೇ ಕೋರ್ಟ್‌ಗೆ ಅರ್ಜಿ

## ನನ್ನ ಮಗಳು ಯಾವುದೋ ಒತ್ತಡಕ್ಕೆ ಒಳಗಾಗಿ ಹೇಳಿಕೆ ನೀಡಿದ್ದಾಗಿ ಶಂಕೆ ವ್ಯಕ್ತವಾಗುತ್ತಿದೆ। ಆಕೆ ಸ್ವ ಇಚ್ಛೆಯಿಂದ ಹೇಳಿಕೆ ನೀಡುವ ಸ್ಥಿತಿ ಈಗಿಲ್ಲ। ಕೆಲ ದಿನಗಳ ಕಾಲ ಆಕೆಯನ್ನು ಏಕಾಂತದಲ್ಲಿ ಇರಿಸಬೇಕು

1/4/21

**ವಿಶ್ವವಾಣಿ ಸುದ್ದಿಮನೆ** ಬೆಂಗಳೂರು

ರಾಸಲೀಲೆ ಸಿಡಿ ಪ್ರಕರಣ ದಿನಕ್ಕೊಂದು ತಿರುವು ಪಡೆದುಕೊಳ್ಳುತ್ತಿದ್ದು, ಇದೀಗ ಯುವತಿ ತಂದೆಯೇ ತಮ್ಮ ಮಗಳ ಹೇಳಿಕೆಯನ್ನು ಪರಿಗಣಿಸಬೇಡಿ ಎಂದು ಹೈಕೋರ್ಟ್‌ನಲ್ಲಿ ಮಧ್ಯಂತರ ಅರ್ಜಿ ಸಲ್ಲಿಸಿದ್ದಾರೆ.

ಅರ್ಜಿಯಲ್ಲಿ 'ನನ್ನ ಮಗಳ ಹೇಳಿಕೆಗಳನ್ನು ಯಾವ ಕಾರಣಕ್ಕೂ ಪರಿಗಣಿಸಬೇಡಿ. ಸಿಆರ್‌ಪಿಸಿ 164 ಅಡಿಯಲ್ಲಿ ದಾಖಲು ಮಾಡಿಕೊಳ್ಳಲಾದ ಹೇಳಿಕೆ ರದ್ದುಗೊಳಿಸಿ' ಎಂದು ಹೈಕೋರ್ಟ್‌ಗೆ ಮಧ್ಯಂತರ ಅರ್ಜಿ ಸಲ್ಲಿಸಿದ್ದಾರೆ. ಇದರಿಂದ ಸಿಡಿ ಪ್ರಕರಣಕ್ಕೆ ಮತ್ತೊಂದು ಬಿಗ್ ಟ್ವಿಸ್ಟ್ ಸಿಕ್ಕಿದೆ. 'ನನ್ನ ಮಗಳು ಯಾವುದೋ ಒತ್ತಡಕ್ಕೆ ಒಳಗಾಗಿ ಹೇಳಿಕೆ ನೀಡಿದ್ದಾಗಿ ಶಂಕೆ ವ್ಯಕ್ತವಾಗುತ್ತಿದೆ. ಆಕೆ ಸ್ವ ಇಚ್ಛೆಯಿಂದ ಹೇಳಿಕೆ ನೀಡುವ ಸ್ಥಿತಿ ಈಗಿಲ್ಲ. ಕೆಲ ದಿನಗಳ ಕಾಲ ಆಕೆಯನ್ನು ಏಕಾಂತದಲ್ಲಿ ಇರಿಸಬೇಕು ಅಥವಾ ನ್ಯಾಯಾಂಗದ ಸುಪರ್ದಿಯಲ್ಲಿಡಬೇಕು. ಅದೂ ಆಗದೆ ಇದ್ದರೆ ಕೋರ್ಟ್ ಸೂಚಿಸಿದ ಸ್ವತಂತ್ರ ಸಂಸ್ಥೆಯ ಸುಪರ್ದಿಯಲ್ಲಿ ಇಡಬೇಕು. ಅಂದಾಗ ಮಾತ್ರ ನನ್ನ ಮಗಳು ಸ್ವ ಇಚ್ಛೆಯಿಂದ ಹೇಳಿಕೆ ನೀಡಲು ಸಾಧ್ಯ' ಎಂದು ಹೈಕೋರ್ಟ್‌ಗೆ ಸಲ್ಲಿಸಿದ ಅರ್ಜಿಯಲ್ಲಿ ಉಲ್ಲೇಖಿಸಿದ್ದಾರೆ.



### ರಮೇಶ್ ಜಾರಕಿಹೊಳಿಗೆ ಬಂಧನದ ಭೀತಿ?

ಸಂತ್ರಸ್ತ ಯುವತಿ ಮ್ಯಾಜಿಸ್ಟ್ರೇಟ್ ಎದುರು ಹಾಜರಾಗಿ ಹೇಳಿಕೆಯನ್ನು ದಾಖಲಿಸಿ ಕೆಲ ಪೂರಕ ಸಾಕ್ಷ್ಯಾಧಾರಗಳನ್ನು ಒದಗಿಸಿ ವೈದ್ಯಕೀಯ ಪರೀಕ್ಷೆಗೆ ಒಳಗಾಗಿರುವುದರಿಂದ ಮಾಜಿ ಸಚಿವ ರಮೇಶ್ ಜಾರಕಿಹೊಳಿ ಅವರನ್ನು ಪೊಲೀಸರು ಬಂಧಿಸುವ ಸಾಧ್ಯತೆ ಹೆಚ್ಚಾಗಿದೆ. ರಮೇಶ್ ಅವರ ಇಬ್ಬರು ಸಹೋದರರು ಕಾನೂನು ತಜ್ಞರ ಜತೆ ನಿರಂತರ ಸಂಪರ್ಕದಲ್ಲಿದ್ದು, ಎಫ್‌ಐಆರ್ ರದ್ದು ಮಾಡುವಂತೆ ಕೋರಿ ನ್ಯಾಯಾಲಕ್ಕೆ ಮೇಲ್ಮನವಿ ಸಲ್ಲಿಸಬೇಕೆ? ಅಥವಾ ನಿರೀಕ್ಷಣಾ ಜಾಮೀನಿಗೆ ಅರ್ಜಿ ಸಲ್ಲಿಸಬೇಕೆ ಎಂಬುದರ ಬಗ್ಗೆ ಸಲಹೆ ಪಡೆದಿದ್ದಾರೆ ಎನ್ನಲಾಗಿದೆ.

### 300 ಪುಟಗಳ ಚಾಟ್ ಹಿಸ್ಟರಿ ಸಲ್ಲಿಕೆ

ಪ್ರಕರಣಕ್ಕೆ ಸಂಬಂಧಿಸಿದಂತೆ ರಮೇಶ್ ಜಾರಕಿಹೊಳಿ ಅವರು ಯುವತಿಯೊಂದಿಗೆ ಚಾಟ್ ಮಾಡಿರುವ ಸುಮಾರು 300 ಪುಟಗಳ ಚಾಟ್ ಹಿಸ್ಟರಿಯನ್ನು ಯುವತಿ ಪರ ವಕೀಲ ಜಗದೀಶ್ ಎಸ್‌ಐಟಿಗೆ ನೀಡಿದ್ದಾರೆ. ಜತೆಗೆ ಬೆಲೆ ಬಾಳುವ ಗಿಫ್ಟ್ ವಸ್ತುಗಳನ್ನು ಕೊಡಿಸಿರುವ ಬಿಲ್ ಹಾಗೂ ಫೋಟೋ ಗಳನ್ನು ನೀಡಿದ್ದಾರೆ. ಈ ಹಿನ್ನೆಲೆಯಲ್ಲಿ ಯುವತಿಯ ಮೊಬೈಲ್ ಅನ್ನು ವಶಕ್ಕೆ ಪಡೆದಿರುವ ಎಸ್‌ಐಟಿ ಅಧಿಕಾರಿಗಳು ಅದನ್ನು ಎಫ್‌ಎಸ್‌ಎಲ್‌ಗೆ ರವಾನೆ ಮಾಡುವ ಸಾಧ್ಯತೆ ಇದೆ.

### ಸಂತ್ರಸ್ತೆಯ ದಿನಚರಿ

- ಬೆಳಗ್ಗೆ 11 ಗಂಟೆಗೆ ಬೌರಿಂಗ್ ಆಸ್ಪತ್ರೆಗೆ ಸಂತ್ರಸ್ತೆ ಹಾಜರು
- ಬೆಳಗ್ಗೆ 11:30 ರಿಂದ ಮಧ್ಯಾಹ್ನ 3 ಗಂಟೆವರೆಗೂ ವಿವಿಧ ಪರೀಕ್ಷೆ ಮತ್ತು ಕೌನ್ಸೆಲಿಂಗ್
- ಸಂಜೆ 4 ಗಂಟೆಗೆ ಆಡುಗೋಡಿಯ ಟೆಕ್ನಿಕಲ್ ಸೆಂಟರ್‌ಗೆ ಆಗಮನ
- 4:30 ರಿಂದ 8:30 ರ ವರೆಗೂ ಎಸ್‌ಐಟಿ ವಿಚಾರಣೆ
- 8: 30ರ ನಂತರ ಟೆಕ್ನಿಕಲ್ ಸೆಂಟರ್‌ನಿಂದ ವಾಪಸ್